# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1008 |
| ಸದಸ್ಯರ ಹೆಸರು | : | ಡಾ: ತಾಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 20.08.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ಡಾ:ಡಿ.ಎಂ.ನಂಜುಂಡಪ್ಪನವರ ವರದಿ ಆಧರಿಸಿ ಪ್ರಾದೇಶಿಕ ಅಸಮತೋಲನ ನಿವಾರಣೆಯ ಉದ್ದೇಶದಿಂದ ಕಲ್ಯಾಣ ಕರ್ನಾಟಕದ ಬೀದರ್ ನಗರದಲ್ಲಿ ಸ್ಥಾಪನೆಗೊಂಡಿರುವ ಪಶುವೈದ್ಯಕೀಯ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅತಂತ್ರ ಸ್ಥಿತಿ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಡಾ:ಡಿ.ಎಂ.ನಂಜುಂಡಪ್ಪರವರ ವರದಿಯನ್ನು ಆಧರಿಸಿ ಪ್ರಾದೇಶಿಕ ಅಸಮತೋಲನ ನಿವಾರಣೆಯ ಉದ್ದೇಶದಿಂದ ಕಲ್ಯಾಣ ಕರ್ನಾಟಕದ ಬೀದರನಲ್ಲಿ 2005ನೇ ಸಾಲಿನಲ್ಲಿ ಸ್ಥಾಪನೆಗೊಂಡಿರುವ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಯಾವುದೇ ಅತಂತ್ರ ಸ್ಥಿತಿಯಲ್ಲಿ ಎದುರಿಸುತ್ತಿಲ್ಲ. ವಿಶ್ವವಿದ್ಯಾಲಯವು ಪಶುವೈದ್ಯಕೀಯ, ಹೈನುಗಾರಿಕೆ ಮತ್ತು ಮೀನುಗಾರಿಕೆ ವಿಷಯಗಳಲ್ಲಿ ಬೋಧನೆ, ಸಂಶೋಧನೆ ಮತ್ತು ವಿಸ್ತರಣಾ ಚಟುವಟಿಕೆಗಳ ಮುಖಾಂತರ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ವಿಶ್ವವಿದ್ಯಾಲಯವು ಪ್ರಾರಂಭಗೊಂಡ ನಂತರದ ಪ್ರಮುಖ ಸಾಧನೆಗಳು ಈ ಕೆಳಗಿನಂತಿವೆ:-<br>**ಬೋಧನೆ**: ಕರ್ನಾಟಕ ರಾಜ್ಯದಲ್ಲಿ ಕೇವಲ 2 ಪಶುವೈದ್ಯಕೀಯ ಮಹಾವಿದ್ಯಾಲಯಗಳು (ಬೆಂಗಳೂರು ಮತ್ತು ಬೀದರ) ಕಾರ್ಯನಿರ್ವಹಿಸುತ್ತಿದ್ದವು. ಆದರೆ, ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಪ್ರಾರಂಭಗೊಂಡ ನಂತರ ನೂತನವಾಗಿ 04 ಪಶುವೈದ್ಯಕೀಯ ಮಹಾವಿದ್ಯಾಲಯಗಳನ್ನು, 01 ಹೈನು ವಿಜ್ಞಾನ ಮಹಾವಿದ್ಯಾಲಯವನ್ನು ಮತ್ತು 05 ಪಶು ಸಂಗೋಪನಾ ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ.<br>2005 ರ ನಂತರ ಪ್ರಾರಂಭಗೊಂಡ ವಿಶ್ವವಿದ್ಯಾಲಯದಲ್ಲಿ ಇದೂವರೆಗೆ ಪಶು ವೈದ್ಯಕೀಯ ವಿಜ್ಞಾನ, ಹೈನು ವಿಜ್ಞಾನ ಮತ್ತು ಮೀನುಗಾರಿಕೆ ವಿಜ್ಞಾನಗಳಲ್ಲಿ ಸ್ನಾತಕ, ಸ್ನಾತಕೋತ್ತರ ಮತ್ತು ಪಿ.ಹೆಚ್.ಡಿ. ಪದವಿಗಳನ್ನು ಪಡೆದುಕೊಂಡಿರುವ ವಿವರಗಳು ಈ ಕೆಳಕಂಡಂತಿದೆ:- |

| ಕೋರ್ಸ್ | ಸ್ನಾತಕ | ಸ್ನಾತ ಕೋತ್ತರ | ಪಿ.ಹೆಚ್.ಡಿ. | ಒಟ್ಟು |
|---|---|---|---|---|
| ಪಶುವೈದ್ಯಕೀಯ ವಿಜ್ಞಾನ | 3576 | 1293 | 308 | 5177 |
| ಹೈನುಗಾರಿಕೆ ವಿಜ್ಞಾನ | 788 | 164 | 28 | 980 |
| ಮೀನುಗಾರಿಕೆ ವಿಜ್ಞಾನ | 664 | 363 | 127 | 1084 |
| ಒಟ್ಟು | | | | 7241 |

| | | |
|---|---|---|
| | | ಸದರಿ ವಿಶ್ವವಿದ್ಯಾಲಯದ ಅಧೀನದಲ್ಲಿನ 05 ಪಶುಸಂಗೋಪನಾ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಇದುವರೆಗೆ ಸುಮಾರು 2089 ವಿದ್ಯಾರ್ಥಿಗಳು ಡಿಪ್ಲೋಮಾ (ಪಶುಸಂಗೋಪನೆ) ಕೋರ್ಸನ್ನು ಪೂರ್ಣಗೊಳಿಸಿರುತ್ತಾರೆ.<br>**ಸಂಶೋಧನೆ**: ಪಶುವೈದ್ಯಕೀಯ ವಿಶ್ವವಿದ್ಯಾಲಯವು ಸ್ಥಾಪನೆಗೊಂಡ ನಂತರ 05 ಜಾನುವಾರು ಮತ್ತು ಮೀನುಗಾರಿಕೆ ಸಂಶೋಧನಾ ಕೇಂದ್ರಗಳನ್ನು ಹಾಗೂ 01 ವನ್ಯಜೀವಿ ಸಂಶೋಧನಾ ಕೇಂದ್ರವನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ಥಾಪನೆ ಮಾಡಲಾಗಿದೆ.<br><br>ವಿಶ್ವವಿದ್ಯಾಲಯವು ಪ್ರಾರಂಭಗೊಂಡ ನಂತರ ಸುಮಾರು 300 ಕ್ಕೂ ಅಧಿಕ ಸಂಶೋಧನಾ ಯೋಜನೆಗಳನ್ನು ಪಶುವೈದ್ಯಕೀಯ, ಹೈನುಗಾರಿಕೆ ಮತ್ತು ಮೀನುಗಾರಿಕಾ ವಿಜ್ಞಾನಗಳಲ್ಲಿ ಕೈಗೊಳ್ಳಲಾಗಿದೆ.<br><br>ಇದರಿಂದ ಸ್ವದೇಶಿ ತಳಿ, ಆಕಳು, ಕುರಿ, ಮುಧೋಳ ನಾಯಿ ತಳಿಯ ಸಂರಕ್ಷಣೆ ಆಗಿದೆ. ಇದಲ್ಲದೇ ಅಮೂರ ತಳಿಯ ನೂತನ ಮೀನನ್ನು ಅಭಿವೃದ್ಧಿಪಡಿಸಲಾಗಿದ್ದು ಇವುಗಳನ್ನು 17 ರಾಜ್ಯಗಳಿಗೆ ನೀಡಲಾಗುತ್ತಿದೆ. ಸ್ವರ್ಣಧಾರ ಕೋಳಿ ತಳಿಯನ್ನು ಅಭಿವೃದ್ಧಿಪಡಿಸಲಾಗಿದೆ. ಹಂದಿಗಳಿಗೆ Clasical Swine fever ಲಸಿಕೆಯನ್ನು ದೇಶದಲ್ಲಿ ಮೊದಲ ಬಾರಿಗೆ ಅಭಿವೃದ್ಧಿ ಪಡಿಸಲಾಗಿದೆ.<br><br>**ವಿಸ್ತರಣೆ:** ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯಿಂದ ಪ್ರತಿ ವರ್ಷವೂ ಜಾನುವಾರುಗಳ ವಿವಿಧ ರೋಗಗಳಿಗೆ 8.5 ಕೋಟಿ ಲಸಿಕೆಗಳನ್ನು ಉತ್ಪಾದಿಸಲಾಗುತ್ತಿದ್ದು, ಜಾನುವಾರುಗಳ ಅರೋಗ್ಯ ರಕ್ಷಣೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸಿದೆ.<br><br>ರೈತರಿಗೆ ಮತ್ತು ಪಶುವೈದ್ಯಾಧಿಕಾರಿಗಳಿಗಾಗಿ 1000 ಕ್ಕೂ ಅಧಿಕ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.<br><br>ವಿಶ್ವವಿದ್ಯಾಲಯದ ಪಶುವೈದ್ಯಕೀಯ ಆಸ್ಪತ್ರೆಗಳ ಮುಖಾಂತರ ಪ್ರತಿ ವರ್ಷ 01 ಲಕ್ಷಕ್ಕೂ ಅಧಿಕ ಜಾನುವಾರಗಳ ತಪಾಸಣೆ ಹಾಗೂ ನುರಿತ ಚಿಕಿತ್ಸೆಯನ್ನು ಕೋಡಲಾಗಿದೆ.<br><br>ಈ ಮೇಲಿನ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ಹಾಗೂ ನೂತನ ಮಹಾವಿದ್ಯಾಲಯಗಳಿಂದ ಕಲ್ಯಾಣ ಕರ್ನಾಟಕ ಮತ್ತು ರಾಜ್ಯದ ಇತರ ಭಾಗದ ವಿದ್ಯಾರ್ಥಿಗಳು ಪ್ರವೇಶ ಪಡೆದು ಸ್ನಾತಕ, ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿಗಳನ್ನು ಪಡೆದು ತೀವ್ರ ಕೊರತೆಯಾಗಿದ್ದ ಪಶುವೈದ್ಯಕೀಯ ಕ್ಷೇತ್ರಕ್ಕೆ ಮಾನವ ಸಂಪನ್ಮೂಲವನ್ನು ಒದಗಿಸಿದಂತಾಗಿದೆ. ಇದರಿಂದ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ತೀವ್ರ ಕೊರತೆಯಿದ್ದ ಪಶು ವೈದ್ಯರ ಸಂಖ್ಯೆಯು ಹೆಚ್ಚಳವಾಗಿ ಪಶು ಸಂಗೋಪನಾ ಕ್ಷೇತ್ರದಿಂದ ರೈತರ ಆರ್ಥಿಕತೆಯು ಹೆಚ್ಚಳವಾಗುತ್ತಿರುವದು ಕಂಡು ಬಂದಿರುತ್ತದೆ. ಇದರಿಂದ ಮಾನ್ಯ ಡಾ:ಡಿ.ಎಂ. ನಂಜುಂಡಪ್ಪ ನವರ ವರದಿಯ ಶಿಫಾರಸ್ಸಿಗೆ ನ್ಯಾಯ ದೊರಕಿಸಿದಂತಾಗಿದೆ. |

<table>
<tr>
<td>ಆ)</td>
<td>ಈ ವಿಶ್ವವಿದ್ಯಾಲಯ ಸ್ವತಂತ್ರವಾಗಿ ಕೆಲಸ ಮಾಡಲು ಅವಕಾಶ ಕೊಡದೆ ಸರ್ಕಾರ ಇಂದು ರಾಯಚೂರಿನ ಕೃಷಿ ವಿಶ್ವವಿದ್ಯಾಲಯ ಮತ್ತು ಬಾಗಲಕೋಟೆಯ ತೋಟಗಾರಿಕಾ ವಿಶ್ವವಿದ್ಯಾಲಯಗಳೊಂದಿಗೆ ವಿಲೀನಗೊಳಿಸಲು ಮುಂದಾಗಿರುವುದು ನಿಜವೇ:</td>
<td>ವಿಶ್ವವಿದ್ಯಾಲಯವು ಸ್ವತಂತ್ರವಾಗಿ ಕೆಲಸಮಾಡಲು ಎಲ್ಲಾ ರೀತಿಯಲ್ಲೂ ಅವಕಾಶ ಮಾಡಿಕೊಡಲಾಗಿದೆ. ಪ್ರಸ್ತುತ ಈ ವಿಶ್ವವಿದ್ಯಾಲಯವನ್ನು ರಾಯಚೂರು ಕೃಷಿ ವಿಶ್ವವಿದ್ಯಾಲಯ ಮತ್ತು ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದೊಂದಿಗೆ ವಿಲೀನಗೊಳಿಸುವ ಪ್ರಸ್ತಾಪ ಇರುವುದಿಲ್ಲ.</td>
</tr>
<tr>
<td>ಇ)</td>
<td>ಬೀದರ್‌ನ ಪಶುವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆ, ಕಟ್ಟಡಗಳ ಕೊರತೆ, ಅನುದಾನದ ಕೊರತೆಗಳ ನಿವಾರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ:</td>
<td>ಬೀದರ ಪಶುವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಖಾಲಿಯಿರುವ ಬೋದಕ ಮತ್ತು ಬೋದಕೇತರ ಹುದ್ದೆಗಳನ್ನು ಭರ್ತಿ ಮಾಡಲು ನೇರ-ನೇಮಕಾತಿ ಮತ್ತು ಗುತ್ತಿಗೆ/ಹೊರಗುತ್ತಿಗೆ/ನಿಯೋಜನ ಮೇಲೆ ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿರುತ್ತದೆ. ಆದರೆ, ಮಹಾವಿದ್ಯಾಲಯಗಳನ್ನು ಮತ್ತು ಸಂಸ್ಥೆಗಳನ್ನು ಹೊಸದಾಗಿ ಸ್ಥಾಪಿಸಲಾಗಿರುವುದರಿಂದ ಹಾಗೂ ವಯೋನಿವೃತ್ತಿಯಿಂದ ಹುದ್ದೆಗಳು ಪ್ರಸ್ತುತ ಖಾಲಿ ಇರುತ್ತವೆ.<br><br>ಪ್ರಸ್ತುತ ಪರಿಶಿಷ್ಟ ಜಾತಿಯ ಒಳಮೀಸಲಾತಿ ಪ್ರಕ್ರಿಯೆ ಜಾರಿಯಲ್ಲಿದ್ದು, ಸದರಿ ಪ್ರಕ್ರಿಯೆ ಪೂರ್ಣಗೊಂಡ ನಂತರ ನಿಯಮಾನುಸಾರ ಪರಿಶೀಲಿಸಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮವಹಿಸಬೇಕಿರುತ್ತದೆ.<br><br>ವಿಶ್ವವಿದ್ಯಾಲಯದಲ್ಲಿ ಬೋಧಕ / ಬೋಧಕೇತರ ಕೆಲಸ ಕಾರ್ಯಗಳಿಗೆ ಯಾವುದೇ ಕಟ್ಟಡಗಳ ಕೊರತೆಯಿರುವುದಿಲ್ಲ.<br><br>ವಿಶ್ವವಿದ್ಯಾಲಯದ ವಿವಿಧ ಚಟುವಟಿಕೆಗಳಿಗೆ ಅವಶ್ಯವಿರುವ ಅನುದಾನವನ್ನು ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಲಾಗಿದ್ದು, ವಿವರಗಳು ಈ ಕೆಳಗಿನಂತಿದೆ:-
<table>
<tr><th>ವರ್ಷ</th><th>ಬಿಡುಗಡೆಗೊಂಡ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>2022-23</td><td>21039.17</td></tr>
<tr><td>2023-24</td><td>20284.35</td></tr>
<tr><td>2024-25</td><td>20887.72</td></tr>
</table>
</td>
</tr>
<tr>
<td>ಈ)</td>
<td>ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿರುವಾಗ ಈ ವಿಶ್ವವಿದ್ಯಾಲಯ ಬೇರೆ ವಿಶ್ವವಿದ್ಯಾಲಯಗಳೊಂದಿಗೆ ವಿಲೀನಗೊಳಿಸಲು ಈಗಾಗಲೇ ಉನ್ನತಾಧಿಕಾರಿ ಸಮಿತಿ ರಚಿಸಿರುವುದು ಈ ಭಾಗದ ಜನರಿಗೆ ಅನ್ಯಾಯ</td>
<td>ಶ್ರೀ.ಟಿ.ಎಂ. ವಿಜಯಭಾಸ್ಕರ್ ಭಾ.ಆ.ಸೇ. ಸರ್ಕಾರದ ಮುಖ್ಯ ಕಾರ್ಯದರ್ಶಿ ಕರ್ನಾಟಕ ಸರ್ಕಾರ (ನಿವೃತ್ತ), ಇವರ ನೇತೃತ್ವದಲ್ಲಿ Integrated ವಿಶ್ವವಿದ್ಯಾನಿಲಯಗಳನ್ನು ರಾಜ್ಯಾದ್ಯಂತ ಸ್ಥಾಪಿಸುವುದಕ್ಕಾಗಿ ಕೃಷಿ, ತೋಟಗಾರಿಕೆ, ಪಶುಸಂಗೋಪನ ಮತ್ತು ಅರಣ್ಯ ಕಾಲೇಜುಗಳ ಮರು ಸಂಘಟನೆ (Re-organization of Agricultural Universities) ಬಗ್ಗೆ ತಜ್ಞರ ಸಮಿತಿಯನ್ನು ರಚಿಸಲಾಗಿದ್ದು, ಸದರಿ ತಜ್ಞರ ಸಮಿತಿಯು ರಾಜ್ಯಾದ್ಯಂತ ಎಲ್ಲಾ ಕೃಷಿ, ತೋಟಗಾರಿಕೆ ಮತ್ತು</td>
</tr>
</table>

| | | |
|---|---|---|
| | ಮಾಡಿದಂತಾಗುವುದಿಲ್ಲವೇ. ವಿಶ್ವವಿದ್ಯಾಲಯದ ಬೆಳವಣಿಗೆಗೆ ಕುತ್ತು ತಂದಂತಲ್ಲವೇ: | ಪಶುವೈದ್ಯಕೀಯ ವಿಶ್ವವಿದ್ಯಾಲಯ ಮತ್ತು ಅದರ ಅಧೀನದಲ್ಲಿನ ಮಹಾವಿದ್ಯಾಲಯ ಹಾಗೂ ಜಾನುವಾರು ಸಂಶೋಧನಾ ಕೇಂದ್ರಗಳಿಗೆ ಭೇಟಿ ನೀಡಿ ಅವುಗಳ ಕಾರ್ಯ-ಚಟುವಟಿಕೆಗಳು, ಸೌಲಭ್ಯಗಳು, ಮಾನವ ಸಂಪನ್ಮೂಲಗಳು ಮತ್ತು ಆರ್ಥಿಕ ಅನುದಾನಗಳ ಬಗ್ಗೆ ಅಧ್ಯಯನ ಮಾಡಲಾಗಿರುತ್ತದೆ.<br><br>ಮುಂದುವರೆದು, ಸದರಿ ಸಮಿತಿಯು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರಗೆ ಭೇಟಿ ನೀಡಿ ವಿಜ್ಞಾನಿಗಳು, ಅಧಿಕಾರಿಗಳು, ವಿದ್ಯಾರ್ಥಿಗಳು ಮತ್ತು ಉದ್ದಿಮೆದಾರರ ಜೊತೆಗೆ ಚರ್ಚೆ ನಡೆಸಿ ವಿಶ್ವವಿದ್ಯಾಲಯಗಳನ್ನು ಒಗ್ಗೂಡಿಸುವ ಕುರಿತಂತೆ ಅಭಿಪ್ರಾಯ ಸಂಗ್ರಹಿಸಿತ್ತು.<br><br>ಆದರೆ, ಸದರಿ ವಿಶ್ವವಿದ್ಯಾಲಯವು ವಿಶೇಷ ವಿಜ್ಞಾನಗಳ ವಿಶ್ವವಿದ್ಯಾಲಯವಾಗಿದ್ದು ಇದರ ಕಾರ್ಯವೈಖರಿಯು ಇತರೆ ಕೃಷಿ ವಿಶ್ವವಿದ್ಯಾಲಯಗಳ ಚಟುವಟಿಕೆಗಳಿಗಿಂತ ಭಿನ್ನವಾಗಿರುವುದರಿಂದ, ಈ ವಿಶ್ವವಿದ್ಯಾಲಯವನ್ನು ಸ್ವತಂತ್ರವಾಗಿಯೇ ಮುಂದುವರಿಸಲು ಮನವರಿಕೆ ಮಾಡಿಕೊಡಲಾಗಿರುತ್ತದೆ. |
| ಉ) | ಬೀದರ್‌ನ ಪಶುವೈದ್ಯಕೀಯ ವಿಶ್ವವಿದ್ಯಾಲಯ ಬೇರೆ ವಿಶ್ವವಿದ್ಯಾಲಯಗಳೊಂದಿಗೆ ವಿಲೀನಗೊಳಿಸದೇ ಉನ್ನತಾಧಿಕಾರಿ ಸಮಿತಿ ರದ್ದುಪಡಿಸಿ ಆ ವಿಶ್ವವಿದ್ಯಾಲಯ ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಟ್ಟು ಅದರ ಬೆಳವಣಿಗೆಗೆ ಬೇಕಾದ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ? | ಶ್ರೀ ಟಿ.ಎಂ. ವಿಜಯ ಭಾಸ್ಕರ್, ಭಾ.ಆ.ಸೇ ಸರ್ಕಾರದ ಮುಖ್ಯ ಕಾರ್ಯದರ್ಶಿ (ನಿವೃತ್ತ) ಹಾಗೂ ಸಮನ್ವಯಾಧಿಕಾರಿಗಳು, Re-organization of Agricultural Universities ತಜ್ಞರ ಸಮಿತಿ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ದಿನಾಂಕ:16-06-2025 ರಂದು ಸಭೆಯನ್ನು ಏರ್ಪಡಿಸಿ ಸಮಗ್ರ ವಿಶ್ವವಿದ್ಯಾಲಯಗಳನ್ನು ((Integrated University) ರಾಜ್ಯಾದ್ಯಂತ ಸ್ಥಾಪಿಸುವುದಕ್ಕಾಗಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳ ಮರುಸಂಘಟನೆಯ ಪ್ರಸ್ತಾವನೆಯಲ್ಲಿ ಪಶುವೈದ್ಯಕೀಯ ಕ್ಷೇತ್ರವನ್ನು ಕೈಬಿಡುವ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:16-06-2025 ರಂದು ಸಭೆಯನ್ನು ಏರ್ಪಡಿಸಿ ಸುಧೀರ್ಘವಾಗಿ ಚರ್ಚಿಸಲಾಗಿರುತ್ತದೆ.<br><br>ಮುಂದುವರೆದು, ಸಮಗ್ರ ವಿಶ್ವವಿದ್ಯಾಲಯಗಳನ್ನು ರಾಜ್ಯಾದ್ಯಂತ ಸ್ಥಾಪಿಸುವುದಕ್ಕಾಗಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳ ಮರು ಸಂಘಟನೆಯ ಪ್ರಸ್ತಾವನೆಯಲ್ಲಿ ಪಶುವೈದ್ಯಕೀಯ ಕ್ಷೇತ್ರವನ್ನು ಕೈಬಿಡುವ ಕುರಿತಂತೆ ಕೃಷಿ ಇಲಾಖೆಗೆ ಪತ್ರ ಬರೆಯಲಾಗಿರುತ್ತದೆ. |

**ಸಂಖ್ಯೆ:ಪಸಂಮೀ 286 ಪಅಸೇ 2025**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು